ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಂಸತ್ತು

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ

ದಿನಾಂಕ : DATE : 02/08/2019

# ರಾಜ್ಯಸಭೆಯಲ್ಲೂ ಪ್ರತಿಧ್ವನಿಸಿದ ಸಿದ್ಧಾರ್ಥ ಸಾವು

ನವದೆಹಲಿ: ಉದ್ಯಮಿ ಸಿದ್ಧಾರ್ಥ ನಿಗೂಢ ಸಾವಿನ ಹಿನ್ನೆಲೆಯಲ್ಲಿ ಸರ್ಕಾರ ಆತ್ಮಾವಲೋಕನ ಮಾಡಿಕೊಳ್ಳಬೇಕು. ಉದ್ಯಮಿಗಳು ಹಾಗೂ ಹೂಡಿಕೆದಾರರ ವಿಶ್ವಾಸಗಳಿಸಲು ಕ್ರಮ ಕೈಗೊಳ್ಳಬೇಕು ಎಂದು ಟಿಎಂಸಿ ಗುರುವಾರ ರಾಜ್ಯಸಭೆಯಲ್ಲಿ ಒತ್ತಾಯಿಸಿದೆ. ಶೂನ್ಯ ಅವಧಿಯಲ್ಲಿ ವಿಷಯ ಪ್ರಸ್ತಾಪಿಸಿದ ಟಿಎಂಸಿ ಸಂಸದ ಸುಖೇಂದು ಶೇಖರ್ ರಾಯ್, ಕೈಗಾರಿಕೆಯಲ್ಲಿ ಸೃಷ್ಟಿಯಾಗಿರುವ ಹತಾಶೆ ಹಾಗೂ ಅನುಮಾನಗಳನ್ನು ಸರ್ಕಾರ ಬಗೆಹರಿಸಬೇಕು ಮತ್ತು ಅವರ ವಿಶ್ವಾಸಗಳಿಸುವ ಅಗತ್ಯವಿದೆ. 'ಕೆಫೆ ಕಾಫಿ ಡೇ' ಮಾಲಿಕ ಸಿದ್ಧಾರ್ಥ ದುರಂತ ಸಾವು, ಭಾರತೀಯ ಕಾರ್ಪೋರೇಟರ್‌ಗಳು ಹಾಗೂ ಸಾಮಾನ್ಯ ಜನರಲ್ಲಿ ಆಘಾತ ಮತ್ತು ದುಃಖ ತರಿಸಿದೆ ಎಂದು ಹೇಳಿದ್ದಾರೆ.

ಆದಾಯ ತೆರಿಗೆ ಅಧಿಕಾರಿಗಳು ಮತ್ತು ಇತರ ಪಾಲುದಾರರಿಂದ ಅತಿಯಾದ ಒತ್ತಡಕ್ಕೆ ಒಳಗಾಗಿದ್ದಂತೆ ಕಂಡುಬಂದಿದ್ದರು ಎಂಬ ಸಂಗತಿಯನ್ನೂ ರಾಯ್ ಗಮನಕ್ಕೆ ತಂದರು.